ಮಿನಿ ಅಂಗನವಾಡಿಗಳನ್ನು ಮೇಲ್ದರ್ಜೆಗೇರಿಸುವುದು

5062 (5379); ಶ್ರೀ ಅರಬೈಲ್ ಶಿವರಾಮ್ ಹೆಬ್ಬಾರ್ (ಯಲ್ಲಾಪುರ)

ಅ) ರಾಜ್ಯದಲ್ಲಿರುವ ಮಿನಿ ಅಂಗನವಾಡಿಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಆ) ಹಾಗಿದ್ದಲ್ಲಿ, ಇದುವರೆಗೆ ಎಷ್ಟು ಅಂಗನವಾಡಿಗಳನ್ನು ಮೇಲ್ದರ್ಜೆಗೇರಿಸಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)?

ಶ್ರೀಮತಿ ಉಮಾಶ್ರೀ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

ಅ) ರಾಜ್ಯದಲ್ಲಿ ಪ್ರಸ್ತುತ 3331 ಮಿನಿ ಅಂಗನವಾಡಿ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿದ್ದು ಸದರಿ ಮಿನಿ ಅಂಗನವಾಡಿ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಅವಕಾಶವಿರುವುದಿಲ್ಲವೆಂದು ಕೇಂದ್ರ ಸರ್ಕಾರ ತಿಳಿಸಿರುತ್ತದೆ. ಈ ಹಿನ್ನೆಲೆಯಲ್ಲಿ ಮಿನಿ ಅಂಗನವಾಡಿ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ಆ) ಇದುವರೆವಿಗೂ ಮಿನಿ ಅಂಗನವಾಡಿ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಿರುವುದಿಲ್ಲ.

ಹೊಸದಾಗಿ ಪ್ರಾದೇಶಿಕ ಸಾರಿಗೆ ಕಛೇರಿ ಮಂಜೂರು

5064 (5376); ಶ್ರೀ ಅರವಿಂದ್ ಚಂದ್ರಕಾಂತ್ ಪಾಟೀಲ್ (ಖಾನಾಪುರ)

(ಅ) ಬೆಳಗಾವಿ ಜಿಲ್ಲೆ ಖಾನಾಪುರ ತಾಲ್ಲೂಕಿನಲ್ಲಿ ಪ್ರಾದೇಶಿಕ ಸಾರಿಗೆ ಕಛೇರಿ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಪ್ರಾದೇಶಿಕ ಸಾರಿಗೆ ಕಛೇರಿ ಇಲ್ಲದಿರುವುದರಿಂದ ಸಾರ್ವಜನಿಕರು ತಮ್ಮ ವಾಹನಗಳನ್ನು ನೋಂದಣಿ ಮಾಡಿಸಲು ಪರವಾನಗಿ ಪಡೆಯಲು ತೊಂದರೆಯಾಗುತ್ತಿರುವುದರಿಂದ ಹೊಸದಾಗಿ

ಪ್ರಾದೇಶಿಕ ಸಾರಿಗೆ ಕಛೇರಿ ಮಂಜೂರು ಮಾಡುವಂತೆ ಪ್ರಸ್ತಾವನೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಹೊಸ ಪ್ರಾದೇಶಿಕ ಸಾರಿಗೆ ಕಛೇರಿ ಮಂಜೂರು ಮಾಡಲು ಸರ್ಕಾರದ ಕ್ರಮವೇನು?

ಶ್ರೀ ರಾಮಲಿಂಗಾರೆಡ್ಡಿ (ಮಾನ್ಯ ಸಾರಿಗೆ ಸಚಿವರು)

(ಅ) ಬೆಳಗಾವಿ ಜಿಲ್ಲೆ ಖಾನಾಪುರ ತಾಲ್ಲೂಕಿನಲ್ಲಿ ಪ್ರಾದೇಶಿಕ ಸಾರಿಗೆ ಕಛೇರಿ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

(ಆ) ಹೌದು, ಖಾನಾಪುರದಲ್ಲಿ ಹೊಸ ಪ್ರಾದೇಶಿಕ ಸಾರಿಗೆ ಕಛೇರಿ ಮಂಜೂರು ಮಾಡುವ ಸಂಬಂಧ ಪ್ರಸ್ತಾವನೆ ಬಂದಿರುತ್ತದೆ.

(ಇ) ಖಾನಾಪುರ ತಾಲ್ಲೂಕಿನ ಹೆಚ್ಚಿನ ಭಾಗ ಅರಣ್ಯ ಪ್ರದೇಶದಿಂದ ಆವೃತ್ತವಾಗಿದ್ದು, ಈ ಭಾಗದಲ್ಲಿ ವಾಹನಗಳ ಸಂಚಾರ ವಿರಳವಾಗಿರುತ್ತದೆ. ದಿನಾಂಕ: 31-03-2015ರ ಅಂತ್ಯಕ್ಕೆ 23,660 ವಾಹನಗಳು ಮಾತ್ರ ನೋಂದಣಿಯಾಗಿ ಉಪಯೋಗದಲ್ಲಿರುತ್ತವೆ.

ಪ್ರಸ್ತುತ ಖಾನಾಪುರ ತಾಲ್ಲೂಕಿನಲ್ಲಿ ಪ್ರತಿ ಬುಧವಾರದಂದು ಶಿಬಿರಗಳನ್ನು ನಡೆಸಲಾಗುತ್ತಿದ್ದು, ತಾಲ್ಲೂಕಿನ ಸಾರ್ವಜನಿಕರಿಗೆ ಪ್ರತಿ ತಿಂಗಳು ಸರಾಸರಿ 155 ರಿಂದ 165 ಚಾಲನಾ ಅನುಜ್ಞಾ ಪತ್ರಗಳನ್ನು ನೀಡಲಾಗುತ್ತಿದೆ. ಈ ಅಂಕಿ ಅಂಶಗಳನ್ನು ಪರಿಗಣಿಸಿದಲ್ಲಿ ಖಾನಾಪುರ ತಾಲ್ಲೂಕಿನಲ್ಲಿ ಹೊಸದಾಗಿ ಕಛೇರಿ ಪ್ರಾರಂಭಿಸುವ ಅವಶ್ಯಕತೆ ಕಂಡುಬರುವುದಿಲ್ಲವೆಂದು ಜಂಟಿ ಸಾರಿಗೆ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ ಇವರು ಸಲ್ಲಿಸಿರುವ ವರದಿಯಲ್ಲಿ ತಿಳಿಸಿರುವ ಹಿನ್ನೆಲೆಯಲ್ಲಿ ಹೊಸ ಪ್ರಾದೇಶಿಕ ಸಾರಿಗೆ ಕಛೇರಿಯನ್ನು ತೆರೆಯುವ ಅಗತ್ಯತೆ ಇರುವುದಿಲ್ಲ.